ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWSPAPER: ಸಂಯುಕ್ತ ಕರ್ನಾಟಕ
ದಿನಾಂಕ : DATE 29-10-20

# ಸೋಂಕು ಹೆಚ್ಚಳ-ಉಸ್ತುವಾರಿಗಳಿಗೆ ಪತ್ರ

29/10/20

ಸಂ.ಕ. ಸಮಾಚಾರ ಬೆಂಗಳೂರು

ಚಳಿಗಾಲದಲ್ಲಿ ಕೊರೊನಾ ಸೋಂಕು ಹೆಚ್ಚಳವಾಗುವ ಆತಂಕವಿದ್ದು ಈಗಲೇ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವರಿಗೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಪತ್ರ ಬರೆದಿದ್ದಾರೆ.

ತಜ್ಞರ ಪ್ರಕಾರ ಚಳಿಗಾಲದಲ್ಲಿ ಸೋಂಕು ಹೆಚ್ಚಳವಾಗುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ಅನುಸರಿಸಬೇಕಾದ ಕ್ರಮಗಳ ಬಗ್ಗೆ ಪತ್ರದಲ್ಲಿ ಉಲ್ಲೇಖಿಸಿ, ನಾಗರಿಕರ ಮನಸ್ಸಿನಲ್ಲಿ ಕೊರೊನಾ ಕುರಿತಾದ ಭಯವನ್ನು ಸ್ಥಳೀಯ ಧಾರ್ಮಿಕ ಗುರುಗಳ ವತಿಯಿಂದ ನಿವಾರಣೆ ಮಾಡುವ ಪ್ರಸ್ತಾಪ ಕೂಡ ಮಾಡಿದ್ದಾರೆ.

ಕೊರೊನಾ ಸೋಂಕು ಹರಡುವುದನ್ನು ನಿಯಂತ್ರಿಸಲು ಗ್ರಾಮಮಟ್ಟ ಹಾಗೂ ನಗರ ಪ್ರದೇಶಗಳಲ್ಲಿನ ಬೂತ್ ಮಟ್ಟದ ಸಮಿತಿಗಳನ್ನು ಕ್ರಿಯಾಶೀಲಗೊಳಿಸಿ ಅವುಗಳ ಕಾರ್ಯಗಳನ್ನು ಪರಾಮರ್ಶಿಸಬೇಕು. ಸೋಂಕಿತರ ಪ್ರಾಥಮಿಕ ಸಂಪರ್ಕಿತರು ಕಡ್ಡಾಯವಾಗಿ ಪರೀಕ್ಷೆಗೆ ಒಳಪಡುವಂತೆ ಕ್ರಮವಹಿಸಬೇಕು. ಹಿರಿಯ ನಾಗರಿಕರ ಆರೋಗ್ಯದ ಬಗ್ಗೆ ಆರೋಗ್ಯ ಅಧಿಕಾರಿಗಳಿಂದ ನಿರಂತರ ನಿಗಾ ವಹಿಸಬೇಕು. ಹೋಂ ಐಸೋಲೇಷನ್, ಕ್ವಾರಂಟೈನ್‌ನಲ್ಲಿರುವವರ ಆರೋಗ್ಯದ ಬಗ್ಗೆ ನಿಗಾ ವಹಿಸಬೇಕು. ಐಸಿಯುನಲ್ಲಿರುವ ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡಲು ತಜ್ಞರೊಂದಿಗೆ ಟೆಲಿ ಐಸಿಯು ವ್ಯವಸ್ಥೆಯನ್ನು ಬಳಸಿ ಐಸಿಯುನಲ್ಲಿ ದಾಖಲಾದ ರೋಗಿಗಳು ಗುಣಮುಖರಾಗುವಂತೆ ಚಿಕಿತ್ಸೆ ನೀಡಿ ಹೆಚ್ಚು ಸಾವು ಸಂಭವಿಸದಂತೆ ನೋಡಿಕೊಳ್ಳಬೇಕು. ಪ್ರತಿ ಸಾವಿಗೆ ಸಂಬಂಧಿಸಿದಂತೆ ವೈದ್ಯರು ಡೆತ್ ಆಡಿಟ್ ವರದಿಯನ್ನು 24 ಗಂಟೆಗಳ ಒಳಗಾಗಿ ಸಲ್ಲಿಸಬೇಕು, ಸಾರ್ವಜನಿಕ ಸ್ಥಳಗಳಲ್ಲಿ ಮಾಸ್ಕ್ ಧರಿಸುವುದು ಮತ್ತು ಸಾಮಾಜಿಕ ಅಂತರ ಕಾಪಾಡುವುದನ್ನು ಕಡ್ಡಾಯಗೊಳಿಸುವುದು, ಮಾಸ್ಕ್ ಧರಿಸದವರಿಗೆ ನಗರ ಪ್ರದೇಶಗಳಲ್ಲಿ ರೂ. 250 ಹಾಗೂ ಗ್ರಾಮೀಣ ಪ್ರದೇಶದಲ್ಲಿ ರೂ. 100 ದಂಡ ವಿಧಿಸುವ ಕುರಿತು ತಿಳುವಳಿಕೆ ಮೂಡಿಸಬೇಕು. ಪೊಲೀಸ್ ಇಲಾಖೆಯಿಂದ ಕೋವಿಡ್ ನಿಯಮ ಉಲ್ಲಂಘಿಸಿದವರ ವಿರುದ್ಧ ಕಾನೂನಿನ ಪ್ರಕಾರ ಕ್ರಮ ಜರುಗಿಸಬೇಕು. ನಾಗರಿಕರ ಮನಸ್ಸಿನಲ್ಲಿ ಕೋವಿಡ್ ಕುರಿತಾದ ಭಯವನ್ನು ಸ್ಥಳೀಯ ಧಾರ್ಮಿಕ ಗುರುಗಳ ವತಿಯಿಂದ ನಿವಾರಣೆ ಮಾಡುವತ್ತ ಗಮನ ನೀಡಬೇಕು ಎಂದು ತಿಳಿಸಿದೆ.

